ಪಿ.ಡಬ್ಲ್ಯೂ- 2

**ದಿನಾಂಕಃ 14-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ವಿ.ಹೆಚ್.ಟಿ., ಅರ್ಜಿದಾರರ ಪರ ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ಅರ್ಜಿದಾರರ ಪರವಾಗಿ ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿವೆ ಹಾಗೂ ಅದರಲ್ಲಿರುವ ಸಹಿಗಳು ನನ್ನವೇ ಆಗಿರುತ್ತವೆ.

ಸಾಕ್ಷಿಗೆ ನಿಪಿ-9 ನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ಸಹಿಯನ್ನುನಿಪಿ-9(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಎಂ ಹೆಚ್ ಡಬ್ಲ್ಯೂ ಎದುರುದಾರರ ಪರ ವಕೀಲರಿಂದಃ**

1. ಅರ್ಜಿದಾರರಿಗೆ ಅಪಘಾತವಾದ ತಕ್ಷಣ ನಾನು ಚಿಕಿತ್ಸೆಯನ್ನು ನೀಡಿಲ್ಲ ಎಂದರೆ ಸರಿ. ಅರ್ಜಿದಾರರನ್ನು ನಾನು ನಮ್ಮ ಮೆಡಿಕಲ್ ವಿಧಿ ವಿಧಾನದ ಪ್ರಕಾರ ಪರೀಕ್ಷೆ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ನಿಪಿ-9 ರಲ್ಲಿ ಹೇಳಿರುವಂತೆ ಅರ್ಜಿದಾರರಿಗೆ ಶೇಕಡಾ 88 ರಷ್ಟು ಅಂಗನ್ಯೂನ್ಯತೆ ಆಗಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ನಿಪಿ-9 ರಲ್ಲಿ ಹೇಳಿರುವಂತೆ ಅಂಗನ್ಯೂನ್ಯತೆ ಆಗಿಲ್ಲದಿದ್ದರೂ ಸಹ ನಾನು ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-9 ರಲ್ಲಿ ಅರ್ಜಿದಾರರಿಗೆ history of present illness ಗಳನ್ನು ಸುಳ್ಳಾಗಿ ನಮೂದಿಸಿ ಅಂಗನ್ಯೂನ್ಯತೆ ಪ್ರಮಾಣ ಪತ್ರ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸರ್ಕಾರದ ಮಾರ್ಗಸೂಚಿ ಪ್ರಕಾರ ನಾನು ಅರ್ಜಿದಾರರನ್ನು ಪರೀಕ್ಷೆ ಮಾಡಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಅನುಕೂಲವಾಗುವ ರೀತಿಯಲ್ಲಿ ನಿಪಿ-9 ರಲ್ಲಿ ಶೇಕಡಾ 88 ರಷ್ಟು ಶಾಶ್ವತ ಅಂಗನ್ಯೂನ್ಯತೆ ಆಗಿದೆ ಎಂದು ಸುಳ್ಳಾಗಿ ನಮೂದಿಸಿರುತ್ತೇನೆ ಎಂದರೆ ಸರಿಯಲ್ಲ. ಅರ್ಜಿದಾರರು ನಮ್ಮ ಆಸ್ಪತ್ರೆಗೆ ಬಂದಿದ್ದು, ಅವರ ಎಕ್ಸ-ರೇ ತೆಗೆಯಿಸಿ, ಪರೀಕ್ಷೆ ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಅರ್ಜಿದಾರರನ್ನು ಪರೀಕ್ಷಿಸಿದಾಗ ನಿಪಿ-9 ರಲ್ಲಿ Clinical examination ಎಂಬಲ್ಲಿ ನಮೂದಿಸಿರುವಂತೆ ಯಾವುದೇ ನ್ಯೂನ್ಯತೆಗಳು ಕಂಡು ಬಂದಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಯಾವುದೇ ಶಾಶ್ವತ ಅಂಗನ್ಯೂನ್ಯತೆ ಕಂಡು ಬರದೇ ಇದ್ದರೂ ಸಹ ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರವನ್ನು ನೀಡಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ – ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

ಸಹಿ

1 ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಹಾವೇರಿ.